# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 356
ಸದಸ್ಯರ ಹೆಸರು : ಶ್ರೀ ಎಸ್. ಎಲ್. ಧರ್ಮೇಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವವರು : ಮಾನ್ಯ ಸಣ್ಣ ಕೈಗಾರಿಕೆ ಸಚಿವರು
ಉತ್ತರಿಸಬೇಕಾದ ದಿನಾಂಕ : 12.12.2018.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಮಾರಾಟ ಮಳಿಗೆಗಳು ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿವೆಯೇ; ಈ ಮಾರಾಟ ಮಳಿಗೆಗಳಲ್ಲಿ ಮಾರಾಟ ಮಾಡಲಾಗುತ್ತಿರುವ ಬಟ್ಟೆ ಮತ್ತು ಇತರೆ ವಸ್ತುಗಳು ಯಾವುವು; | ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯು ನೇರವಾಗಿ ಯಾವುದೇ ರೀತಿಯ ಮಾರಾಟ ಮಳಿಗೆಯನ್ನು ನಡೆಸುತ್ತಿರುವುದಿಲ್ಲ. ಖಾದಿ ಮಂಡಳಿಯಿಂದ ಧನಸಹಾಯ ಪಡೆದ ಸಂಘ-ಸಂಸ್ಥೆಗಳು ಅವರು ಉತ್ಪಾದಿಸುವ ಉತ್ಪನ್ನಗಳನ್ನು ಮಾರಾಟ ಮಾಡಲು ಮಾರಾಟ ಮಳಿಗೆಯನ್ನು ತೆರೆದಿರುತ್ತಾರೆ. ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಮಾರಾಟ ಮಳಿಗೆಗಳಲ್ಲಿ ರೇಷ್ಮೆ, ಅರಳೆ ಖಾದಿ, ಉಣ್ಣೆ ಮತ್ತು ಪಾಲಿವಸ್ತ್ರ ಬಟ್ಟೆಗಳು ಹಾಗೂ ರೆಡಿಮೇಡ್ ಬಟ್ಟೆಗಳು ಮತ್ತು ಗುಡಿ ಕೈಗಾರಿಕೆಗಳಲ್ಲಿ ಉತ್ಪಾದನೆ ಮಾಡುವ ಎಲ್ಲಾ ಉತ್ಪನ್ನಗಳನ್ನು ಮಾರಾಟ ಮಾಡಲಾಗುತ್ತದೆ. |
| ಆ) | ಕಳೆದ ಮೂರು ವರ್ಷಗಳಿಂದ ಮಂಡಳಿಯ ಮಾರಾಟ ಮಳಿಗೆಗಳಿಂದ ಸರ್ಕಾರಕ್ಕೆ ಲಾಭವಾಗಿದೆಯೇ; ಹಾಗಿದ್ದಲ್ಲಿ, ಮಂಡಳಿಗೆ ಸರ್ಕಾರವು ಬಿಡುಗಡೆ ಮಾಡಿದ ಅನುದಾನ ಮತ್ತು ಮಂಡಳಿಯಿಂದ ಸರ್ಕಾರಕ್ಕೆ ಬಂದ ಆದಾಯ ಎಷ್ಟು; (03 ವರ್ಷಗಳ ವಿವರ ನೀಡುವುದು) | ಖಾದಿ ಮಂಡಳಿಯಿಂದ ಧನಸಹಾಯ ಪಡೆದ ಸಂಘ-ಸಂಸ್ಥೆಗಳು ಉತ್ಪಾದಿಸುವ ಉತ್ಪನ್ನಗಳನ್ನು ಮಾರಾಟ ಮಾಡಲು ಸಂಘ-ಸಂಸ್ಥೆಗಳೇ ಮಾರಾಟ ಮಳಿಗೆಯನ್ನು ತೆರೆದಿರುತ್ತಾರೆ. ಮಂಡಳಿಯು ನೇರವಾಗಿ ಮಾರಾಟ ಮಳಿಗೆ ನಡೆಸುತ್ತಿಲ್ಲವಾದುದರಿಂದ ಸರ್ಕಾರಕ್ಕೆ ಮಾರಾಟ ಮಳಿಗೆಯಿಂದ ಯಾವುದೇ ಲಾಭಬಂದಿರುವುದಿಲ್ಲ. ಹಾಗೂ ಉದ್ಯೋಗ ಸೃಷ್ಟಿ ಮೂಲ ಉದ್ದೇಶವಾಗಿರುತ್ತದೆ. ಖಾದಿ ಮಂಡಳಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರದಿಂದ ವಿವಿಧ ಯೋಜನೆಗಳಿಗಾಗಿ ಬಿಡುಗಡೆ ಮಾಡಲಾದ ಅನುದಾನದ ವಿವರವು ಈ ಕೆಳಕಂಡಂತಿದೆ. (ರೂ. ಲಕ್ಷಗಳಲ್ಲಿ) |

| ಕ್ರಂ.ಸ | ಯೋಜನೆ | 2015-16 | 2016-17 | 2017-18 |
|---|---|---|---|---|
| 1. | ಮಾರುಕಟ್ಟೆ ಅಭಿವೃದ್ಧಿ ಸಹಾಯಧನ | 950.00 | 1200.00 | 1500.00 |
| 2. | ಪ್ರೋತ್ಸಾಹ ಮಜೂರಿ | 950.00 | 1100.00 | 1400.00 |
| 3. | ಮೂಲಭೂತ ಸೌಕರ್ಯ | 438.00 | 245.00 | - |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಮಂಡಳಿಯ ಮಳಿಗೆಗಳನ್ನು ಹೊಸದಾಗಿ ಪ್ರಾರಂಭಿಸುವ ಕುರಿತು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಸ್ಥಳಗಳಲ್ಲಿ ಮಳಿಗೆಗಳನ್ನು ಪ್ರಾರಂಭಿಸಲಾಗುವುದು (ವಿವರ ನೀಡುವುದು) | ಮಂಡಳಿಯ ಮಳಿಗೆಗಳನ್ನು ಹೊಸದಾಗಿ ಪ್ರಾರಂಭಿಸುವ ಯಾವುದೇ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |

| | | |
|---|---|---|
| ಈ) | ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಳಿಗೆಗಳು ಹಾಲಿ ಎಲ್ಲೆಲ್ಲಿ ಕಾರ್ಯನಿರ್ವಹಿಸುತ್ತಿವೆ? (ಪೂರ್ಣ ವಿವರ ನೀಡುವುದು) | ಚಿಕ್ಕಮಗಳೂರು ಜಿಲ್ಲೆಯಲ್ಲಿ ಯಾವುದೇ ಮಾರಾಟ ಮಳಿಗೆಗಳು ಕಾರ್ಯನಿರ್ವಹಿಸುತ್ತಿಲ್ಲ. |

**ಸಿಐ 126 ಸಿಎಸ್‌ಸಿ 2018**

[ಎಸ್.ಆರ್. ಶ್ರೀನಿವಾಸ್ (ವಾಸು)]
ಸಣ್ಣ ಕೈಗಾರಿಕೆ ಸಚಿವರು